ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/10/ಇಸಿಎಸ್(2)/2019-20

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 13-01-2020

## ಜ್ಞಾಪನ

ವಿಷಯ: 2019ರ ಅಕ್ಟೋಬರ್/ನವೆಂಬರ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳಿಂದ ಜರುಗಿದ ಶಂಕಿತ ಮಾಲ್ ಪ್ರಾಕ್ಟೀಸ್ ಪ್ರಕರಣಗಳ ವಿಚಾರಣೆ ನಡೆಸುವ ಕುರಿತು.

ಉಲ್ಲೇಖ: ಈ ಕಛೇರಿ ನೋಟೀಸ್ ಸಂ:ಬಿಟಿಇ/10/ಇಸಿಎಸ್(2)/2019-20 ದಿ:27-12-2019

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ 2019ರ ಅಕ್ಟೋಬರ್/ನವೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳ ಶಂಕಿತ ಮಾಲ್‌ಪ್ರಾಕ್ಟೀಸ್ ಪ್ರಕರಣಗಳಲ್ಲಿ ಭಾಗಿಯಾಗಿರುವ ಬಗ್ಗೆ ತಾಂತ್ರಿಕ ಪರೀಕ್ಷಾ ಮಂಡಳಿಯು ದಿನಾಂಕ:08-01-2020 ರಿಂದ 10-01-2020 ರವರೆಗೆ ವಿದ್ಯಾರ್ಥಿಗಳನ್ನು ವಿಚಾರಣೆಗೊಳಪಡಿಸಲು ಕ್ರಮಕೈಗೊಂಡಿತ್ತು. ಆದಾಗ್ಯೂ ಕೆಲ ವಿದ್ಯಾರ್ಥಿಗಳು, ಕೊಠಡಿ ಮೇಲ್ವಿಚಾರಕರು ಮತ್ತು ಪರೀಕ್ಷಾ ಕೇಂದ್ರದ ಉಪ ಮುಖ್ಯ ಅಧೀಕ್ಷಕರು/ ಮುಖ್ಯ ಅಧೀಕ್ಷಕರು ವಿಚಾರಣೆಗೆ ಗೈರು ಹಾಜರಾಗಿರುವುದು ಕಂಡು ಬಂದಿರುತ್ತದೆ. ವಿದ್ಯಾರ್ಥಿಗಳು ತಮ್ಮ ಹೇಳಿಕೆಯನ್ನು ನೀಡುವ ಸಲುವಾಗಿ ಹಾಗು ಅವರ ಸಮಜಾಯಿಷಿಯನ್ನು ಕೇಳುವ ಉದ್ದೇಶದಿಂದ ಮಾಲ್‌ಪ್ರಾಕ್ಟೀಸ್ ವಿಚಾರಣೆಗೆ ಗೈರುಹಾಜರಾದ ವಿದ್ಯಾರ್ಥಿಗಳು, ಸಂಬಂಧಪಟ್ಟ ಕೊಠಡಿ ಮೇಲ್ವಿಚಾರಕರು ಮತ್ತು ಪರೀಕ್ಷಾ ಉಪ ಮುಖ್ಯ ಅಧೀಕ್ಷಕರು/ ಪರೀಕ್ಷಾ ಮುಖ್ಯ ಅಧೀಕ್ಷಕರು **ದಿನಾಂಕ: 17-01-2020** ರಂದು ತಾಂತ್ರಿಕ ಪರೀಕ್ಷಾ ಮಂಡಳಿ ಬೆಂಗಳೂರು ಇಲ್ಲಿ ವಿಚಾರಣೆಗೆ ಹಾಜರಾಗಲು ಮತ್ತೊಮ್ಮೆ ಈ ಮೂಲಕ ತಿಳಿಸಲಾಗಿದೆ.

ಸದರಿ ಪರೀಕ್ಷಾ ಮಾಲ್‌ಪ್ರಾಕ್ಟೀಸ್‌ಗೆ ಸಂಬಂಧಿಸಿದಂತೆ ಇನ್ನು ಮುಂದೆ ವಿಚಾರಣೆಗೆ ಯಾವುದೇ ದಿನಾಂಕ ನೀಡಲಾಗುವುದಿಲ್ಲ ಹಾಗೂ ಹಿಂದಿನ ವಿಚಾರಣೆಗೆ ಈಗಾಗಲೇ ಗೈರುಹಾಜರಾದ ಶಂಕಿತ ಮಾಲ್‌ಪ್ರಾಕ್ಟೀಸ್ ಆರೋಪಿತ ವಿದ್ಯಾರ್ಥಿಗಳು ಮತ್ತೆ ಈ ವಿಚಾರಣೆಗೂ ಗೈರುಹಾಜರಾದಲ್ಲಿ ಸಮಿತಿಯು ಏಕಪಕ್ಷೀಯವಾಗಿ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

ಈ ಮಾಹಿತಿಯನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸಂಸ್ಥೆಯ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

13/01/2020

ಕಾರ್ಯದರ್ಶಿ

ಇವರಿಗೆ,

ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ -ವೆಬ್‌ಸೈಟ್‌ನಲ್ಲಿ ಪ್ರಕಟಿಸಲು